**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆಯ ನಡವಳಿಗಳು**

ವಿಷಯ: ನ್ಯಾಕ್ ಮೌಲ್ಯಮಾಪನ ಮತ್ತು ಮರು ಮೌಲ್ಯಮಾಪನ ಪ್ರಕ್ರಿಯೆಗೆ ಒಳಪಡುವ ಕಾಲೇಜುಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಅನುದಾನ ಬಿಡುಗಡೆ ಆದೇಶ ಸಂಖ್ಯೆ ಇಡಿ/37/ಹೆಚ್‌ಪಿಸಿ/2016ರ ದಿನಾಂಕ: 01.08.2016.
2. ಇಲಾಖೆಯ ನ್ಯಾಕ್ ಮತ್ತು ರಾಜ್ಯ ಗುಣಮಟ್ಟ ಭರವಸಾ ಕೋಶದ ಸಮನ್ವಯಾಧಿಕಾರಿಗಳ ಸಲ್ಲಿಕೆ ದಿನಾಂಕ: 30.08.2016.

**********

**ಪ್ರಸ್ತಾವನೆ:**

ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ನ್ಯಾಕ್ ಮೌಲ್ಯಮಾಪನಕ್ಕೆ ಒಳಪಡುವುದು ಅವಶ್ಯವಿರುವ ಹಿನ್ನೆಲೆಯಲ್ಲಿ ಮಾನ್ಯತೆಗೆ ಒಳಪಡುತ್ತಿರುವ ಮೊದಲನೇ ಆವೃತ್ತಿಯ (1st-Cycle) ಕಾಲೇಜುಗಳು S.S.R ಸಲ್ಲಿಸಿ, ಪೀರ್‌ಟೀಮ್ ತಂಡದ ಭೇಟಿ ನಿಗಧಿಯಾಗಿರುವ/ನಿರೀಕ್ಷೆಯಲ್ಲಿರುವ ಕಾಲೇಜುಗಳಿಗೆ ದುರಸ್ತಿ ಕಾರ್ಯಗಳು ಹಾಗೂ ಇನ್ನಿತರೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಅನುದಾನವನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಈ ಸಂಬಂಧ ಉಲ್ಲೇಖ(1) ರ ಸರ್ಕಾರಿ ಆದೇಶದಲ್ಲಿ ಇಲಾಖೆಗೆ 2016-17 ರ ಸಾಲಿನಲ್ಲಿ **"ರಾಷ್ಟ್ರೀಯ ಅಂಗೀಕೃತ ಪರಿಷತ್ತು"** ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ "2202-03-112-0-09-059(ಯೋ)" ರಲ್ಲಿ ಒದಗಿಸಿರುವ ಅನುದಾನದ ಮಿತಿಯೊಳಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನ ಬಿಡುಗಡೆ ಮಾಡಲು ಈ ಆದೇಶ.

**ಆದೇಶ ಸಂಖ್ಯೆ:ಕಾಶಿಇ/10(A)/ನ್ಯಾಕ್.ಅಬಿ/2016-17,(ಭಾ-2)ಬೆಂಗಳೂರು ದಿ:15.09.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ನ್ಯಾಕ್ ಮಾನ್ಯತೆಯ ಪ್ರಕ್ರಿಯೆಗೆ ಒಳಪಡುವ ಕೆಳಕಾಣಿಸಿದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ದುರಸ್ತಿ ಕಾರ್ಯಗಳಿಗಾಗಿ ಹಾಗೂ ಇನ್ನಿತರೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಅನುದಾನವನ್ನು **"ರಾಷ್ಟ್ರೀಯ ಅಂಗೀಕೃತ ಪರಿಷತ್ತು"** ಕಾರ್ಯಕ್ರಮದಡಿಯಲ್ಲಿ ಲೆಕ್ಕಶೀರ್ಷಿಕೆ **2202-03-112-0-09-059** ರಡಿಯಲ್ಲಿ ಒದಗಿಸಿರುವ ಅನುದಾನದ ಮಿತಿಯೊಳಗೆ ಈ ಕೆಳಕಂಡ ಷರತ್ತುಗಳಗೊಳಪಟ್ಟು ಬಿಡುಗಡೆ ಮಾಡಲಾಗಿದೆ ಹಾಗೂ ಸದರಿ ಅನುದಾನವನ್ನು ನಿಯಮಾನುಸಾರ ಬಳಸಿಕೊಳ್ಳಲು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅನುಮತಿ ನೀಡಲಾಗಿದೆ.

| ಕ್ರ.ಸಂ | ಕಾಲೇಜಿನ ಹೆಸರು | ಬಿಡುಗಡೆಯಾದ ಅನುದಾನ |
|---|---|---|
| 1. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನೆಲಮಂಗಲ-562110 | 500000 |
| 2. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವೇಮಗಲ್,ಚಿಕ್ಕಬಳ್ಳಾಪುರ-563157 | 400000 |
| 3. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಂಗಾರುತಿರುಪತಿ -563116 | 400000 |
| 4. | ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಕೃಷ್ಣರಾಜನಗರ-571 602 | 500000 |
| 5. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕುದೇರು -571 316, ಚಾಮರಾಜನಗರ ತಾ|| | 400000 |
| 6. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳೇಬೀಡು, ಬೇಲೂರು ತಾ:-573121 | 500000 |
| 7. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪರಶುರಾಮಪುರ,ಚಳ್ಳಕೆರೆ ತಾ:: | 400000 |
| 8. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಾಜಾನಗರ, ಹುಬ್ಬಳ್ಳಿ-580032 | 500000 |
| 9. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಧಾರವಾಡ-580001 | 500000 |
| 10. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಾವೇರಿ-581110 | 500000 |
| 11. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕುಮಟಾ-581343 | 500000 |
| 12. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಿದ್ದಾಪುರ-581355 | 500000 |
| 13. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಂಕಿ-581348, ಹೊನ್ನಾವರ ತಾ|| | 500000 |
| 14. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುನ್ನೂರು-587119, ಜಮಖಂಡಿ ತಾ|| | 500000 |

| | | |
|---|---|---|
| 15. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಂಡೂರು-583119 | 400000 |
| 16. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹುಲಸೂರು-585416, ಬಸವಕಲ್ಯಾಣ ತಾ|| | 500000 |
| | ಒಟ್ಟು ಅನುದಾನ ರೂ | 75,00,000 |
| (ರೂಪಾಯಿ ಎಪತ್ತೈದು ಲಕ್ಷಗಳು ಮಾತ್ರ) | | |

ಷರತ್ತುಗಳು:-

1. ಬಿಡುಗಡೆ ಮಾಡಲಾದ ಅನುದಾನವನ್ನು ಕಾಲೇಜುಗಳ ಪ್ರಾಂಶುಪಾಲರು ಕೆಳಕಾಣಿಸಿದ ಸೌಲಭ್ಯಗಳನ್ನು ಆಧ್ಯತೆಯ ಮೇರೆಗೆ ಕಾರ್ಯ ಕೈಗೊಳ್ಳಲು ಸೂಚಿಸಲಾಗಿದೆ ಹಾಗೂ ಕಾಮಗಾರಿಗಳನ್ನು ನೊಂದಾಯಿತ ಎಲಕ್ಟ್ರಿಕಲ್ ಹಾಗು ಕಟ್ಟಡ ಗುತ್ತಿಗೆದಾರರಿಂದ ನಿಯಮಾನುಸಾರ ರಿಪೇರಿ ಕಾರ್ಯ ನಡೆಸುವುದು.
    - ಗ್ರಂಥಾಲಯದ ಅಟೋನೋಮೇಶನ್ ಪೀಠೋಪಕರಣಗಳ ವ್ಯವಸ್ಥೆ
    - ಗ್ರಂಥಾಲಯಕ್ಕೆ N-list/Inflibnet ವಂತಿಗೆ
    - ಕಾಲೇಜಿಗೆ Internet Facility
    - ಅನುಬಂಧದಲ್ಲಿನ ಜರ್ನಲ್ಸ್‌ಗಳ ವಂತಿಗೆ
    - ವಿದ್ಯುತ್ ಉಪಕರಣಗಳ ದುರಸ್ತಿ
    - ಪೀಠೋಪಕರಣ, ದುರಸ್ತಿ
    - ಕಾಲೇಜಿನ ಕಂಪ್ಯೂಟರ್ ಲ್ಯಾಬ್‌ನ ದುರಸ್ತಿಗಾ
    - ಕಾಲೇಜಿನ ನಾಮ ಫಲಕ ಮತ್ತು ಕೊಠಡಿಗಳಿಗೆ ನಾಮಫಲಕ ಅಳವಡಿಕೆ :
    - ಐ.ಕ್ಯೂ.ಎ.ಸಿಗೆ ಪೀಠೋಪಕರಣಕ್ಕಾಗಿ
    - ಕಾಲೇಜಿನ ಸುಣ್ಣ ಬಣ್ಣಕ್ಕಾಗಿ
    - ಶೌಚಾಲಯ ನವೀಕರಣ ಹಾಗೂ ನೀರು ಸರಬರಾಜು
    - ಕುಡಿಯುವ ನೀರಿನ ವ್ಯವಸ್ಥೆ
    - ಕೊಠಡಿಗಳ ಕಿಟಕಿ ಗ್ಲಾಸು ರಿಪೇರಿ, ಬಾಗಿಲುಗಳ ರಿಪೇರಿ
    - ಗಣಕಯಂತ್ರಗಳು, ಝುರಾಕ್ಸ್ ರೀಪೇರಿ.
    - ಇತರೆ ಖರ್ಚುಗಳಿಗಾಗಿ.
2. ಖರೀದಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಖರೀದಿ ನಿಯಮಗಳನ್ನು ಹಾಗೂ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 2000ರ (ಕೆ.ಟಿ.ಪಿ.ಪಿ) ಮತ್ತು ಅದರಡಿಯಲ್ಲಿ ನಿಯಮಗಳನ್ನು ಚಾಚು ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು,
3. ಈ ವೆಚ್ಚವನ್ನು 2017ರ ಮಾರ್ಚ್ ಮಾಹೆಯೊಳಗೆ ಎಲ್ಲಾ ಪ್ರಚಲಿತ ನಿಯಮಗಳನ್ನು ಪಾಲಿಸಿ ಭರಿಸುವುದು.
4. ಈ ಅನುದಾನವನ್ನು ನ್ಯಾಕ್ ಮೌಲ್ಯಮಾಪನ ಪ್ರಕ್ರಿಯೆಗೆ ಒಳಪಟ್ಟ ಕಾಲೇಜುಗಳ ಪ್ರಾಂಶುಪಾಲರು ಮಾತ್ರ ಬಳಸತಕ್ಕದ್ದು.
5. ಬಿಡುಗಡೆ ಮಾಡಲಾದ ಅನುದಾನದ ಖರ್ಚು-ವೆಚ್ಚಗಳನ್ನು ಲೆಕ್ಕ ತಪಾಸಣೆಗೆ ಒಳಪಡಿಸತಕ್ಕದ್ದು.
6. ಬಿಡುಗಡೆ ಮಾಡಲಾದ ಅನುದಾನದ ಬಳಕೆಯ ಬಗ್ಗೆ ಕರ್ನಾಟಕ ಆರ್ಥಿಕ ಸಂಹಿತೆ, ನಿಯಮ 161 ರನ್ವಯ ನಿಗಧಿತ ನಮೂನೆಯಲ್ಲಿಯೇ "ಹಣ ಬಳಕೆಯ ಪ್ರಮಾಣ ಪತ್ರ" ಗಳನ್ನು ಸಿದ್ಧಪಡಿಸಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಮೇಲು ಸಹಿಯೊಂದಿಗೆ ಕಡ್ಡಾಯವಾಗಿ 2017ರ ಏಪ್ರಿಲ್ ಮಾಹೆಯ ಅಂತ್ಯದೊಳಗೆ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಿ, ಬಿಡುಗಡೆಯಾದ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳುವಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಹಾಗೂ ಈ ಷರತ್ತುಗಳು ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

*"ಮಾನ್ಯ ಆಯುಕ್ತರಿಂದ ಕರಡು ಅನುಮೋದಿಸಲ್ಪಟ್ಟಿದೆ"*

ಕಾಲೇಜು ಶಿಕ್ಷಣ ನಿರ್ದೇಶಕರು

*ಅಡಕ: ಅನುಬಂಧ.*

ಇವರಿಗೆ:

1. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಗುಲ್ಬರ್ಗಾ ಮತ್ತು ಧಾರವಾಡ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಖಜಾನಾಧಿಕಾರಿಗಳು, ರಾಜ್ಯ ಹುಝೂರ್‌ಖಜಾನೆ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5. ಲೆಕ್ಕಾಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
6. ಸಮನ್ವಯಾಧಿಕಾರಿಗಳು-ರಾಜ್ಯ ಗುಣಮಟ್ಟ ಭರವಸಾ ಕೋಶ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
7. ಮ್ಯಾನೇಜರ್/ಅಧೀಕ್ಷಕರು, ಯೋಜನಾ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು..
8. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಈ ಆದೇಶವನ್ನು ಇಲಾಖೆಯ ವೆಬ್-ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
9. ಕಛೇರಿ ಪ್ರತಿ.